# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 90(03) |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 11-08-2025 |
| ಉತ್ತರಿಸಬೇಕಾದ ಸಚಿವರು | ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಎಲ್ಲಾ ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ರಾಷ್ಟ್ರೀಯ ವೈದ್ಯಕೀಯ ಆಯೋಗವು (ಎನ್‌ಎಂಸಿ) ತಾನು ನಿಗಧಿಪಡಿಸಿರುವ ಮಾರ್ಗಸೂಚಿಗಳು ಪಾಲನೆಯಾಗಿಲ್ಲ ಎಂದು ಶೋಕಾಸ್ ನೋಟೀಸ್ ಜಾರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ 22 ವೈದ್ಯಕೀಯ ಕಾಲೇಜುಗಳ ಪೈಕಿ 8 ವೈದ್ಯಕೀಯ ಕಾಲೇಜುಗಳ ವಾರ್ಷಿಕ ನವೀಕರಣಕ್ಕೆ ಸಂಬಂಧಿಸಿದಂತೆ ಬೋಧಕ ಸಿಬ್ಬಂದಿಗಳ ಕೊರತೆ ಹಾಗೂ ಇತರೆ ಸೌಲಭ್ಯಗಳ ನ್ಯೂನ್ಯತೆಗಳಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ವೈದ್ಯಕೀಯ ಆಯೋಗದ ವತಿಯಿಂದ ಸಂಸ್ಥೆಗಳಿಗೆ ನೋಟೀಸ್ ನೀಡಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ರಾಷ್ಟ್ರೀಯ ವೈದ್ಯಕೀಯ ಆಯೋಗವು (ಎನ್‌ಎಂಸಿ) ನಿಗಧಿಪಡಿಸಿರುವ ಯಾವ ಮಾನದಂಡಗಳು ಪಾಲನೆಯಾಗಿಲ್ಲ ಮತ್ತು ಅದಕ್ಕೆ ಕಾರಣಗಳೇನು; | ರಾಷ್ಟ್ರೀಯ ವೈದ್ಯಕೀಯ ಆಯೋಗವು (ಎನ್‌ಎಂಸಿ) ನೀಡಿರುವ ಶೋಕಾಸ್ ನೋಟಿಸ್‌ನಲ್ಲಿ ಮುಖ್ಯವಾಗಿ ಈ ಕೆಳಕಂಡ ಅಂಶಗಳಿಗೆ ವಿವರಣೆ ನೀಡಲು ಕೋರಿರುತ್ತಾರೆ.<br>1. ಬೋಧಕ ಸಿಬ್ಬಂದಿಗಳ ಕೊರತೆ.<br>2. ರೋಗ ತಪಾಸಣೆಯ ಪರೀಕ್ಷೆಗಳ ವಾರ್ಷಿಕ ತಖ್ತೆಯ ವರದಿ ಪ್ರಮಾಣ ಕಡಿಮೆ ಇರುವ ಬಗ್ಗೆ ಹಾಗೂ OPD/IPD ಪ್ರಮಾಣ ಕಡಿಮೆ ಇರುವ ಬಗ್ಗೆ.<br>3. MRI ಸೇವೆ ಲಭ್ಯವಿಲ್ಲದಿರುವ ಬಗ್ಗೆ. |
| ಇ) | ರಾಜ್ಯದ ಎಲ್ಲಾ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಅಗತ್ಯ ಮೂಲಸೌಕರ್ಯ ಕಲ್ಪಿಸಲು ಸರ್ಕಾರ ವಿಫಲವಾಗಲು ಕಾರಣಗಳೇನು; | 1. ಬೋಧಕ ಸಿಬ್ಬಂದಿಗಳ ಕೊರತೆಗೆ ಸಂಬಂಧಿಸಿದಂತೆ ಮೀಸಲಾತಿ ಅನ್ವಯವಾಗುವ ಹುದ್ದೆಗಳಿಗೆ ನೇರನೇಮಕಾತಿ ಮಾಡಲು ನಿರ್ಬಂಧ ಇರುವುದರಿಂದ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶವಿರುವುದಿಲ್ಲ. ಆದ್ದರಿಂದ ಅವಶ್ಯವಿರುವ ಬೋಧಕ ಹುದ್ದೆಗಳನ್ನು ಗುತ್ತಿಗೆ ಆದಾರದಲ್ಲಿ ನೇಮಕಾತಿ ಮಾಡಿ ಕೊಳ್ಳಲು ಕ್ರಮವಹಿಸಲಾಗಿರುತ್ತದೆ.<br>2. ಹಲವು ಸಂಸ್ಥೆಗಳಲ್ಲಿ ಬರುವ ರೋಗಿಗಳ ಪ್ರಮಾಣ ಕಡಿಮೆಯಾಗಿರುವುದರಿಂದ ವಾರ್ಷಿಕ ಅಂಕಿ ಅಂಶಗಳ ಪ್ರಮಾಣದಲ್ಲಿ ಕಡಿಮೆ ಇರುತ್ತದೆ. ಆದ್ದರಿಂದ ಆಸ್ಪತ್ರೆಗೆ ಬರುವ ಎಲ್ಲಾ ರೋಗಿಗಳ ದಾಖಲಾತಿಗಳನ್ನು OPD/IPD, Investigation ಗಳನ್ನು ನಿಗದಿತವಾಗಿ ದಾಖಲೆಗೊಳಿಸಿ ಇಂದೀಕರಿಸಲು ತಿಳಿಸಲಾಗಿದೆ.<br>3. MRI ಲಭ್ಯತೆ ಇಲ್ಲದಿರುವ 10 ಸಂಸ್ಥೆಗಳಿಗೆ ಸದರಿ ಯಂತ್ರಗಳನ್ನು ಖರೀದಿಸಲು ಟೆಂಡರ್ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ.<br>ಈ ಅಂಶಗಳ ಹಿನ್ನಲೆಯಲ್ಲಿ ರಾಷ್ಟ್ರೀಯ ವೈದ್ಯಕೀಯ ಆಯೋಗದಿಂದ ನೀಡಲಾಗಿರುವ ಶೋಕಾಸ್ ನೋಟಿಸ್‌ನಲ್ಲಿ ಉಲ್ಲೇಖಿಸಿರುವ ನ್ಯೂನ್ಯತೆಗಳನ್ನು ಸರಿಪಡಿಸಿಕೊಳ್ಳಲು ಈಗಾಗಲೇ ಕ್ರಮ ಕೈಗೊಳ್ಳಲಾಗಿರುತ್ತದೆ ಹಾಗೂ ಕೈಗೊಂಡಿರುವ ಕ್ರಮದ ವರದಿಯನ್ನು ರಾಷ್ಟ್ರೀಯ ವೈದ್ಯಕೀಯ ಆಯೋಗಕ್ಕೆ ಸಲ್ಲಿಸಲಾಗಿದ್ದು, ಸದರಿ ವರದಿಯನ್ನು ಪರಿಗಣಿಸಿ ರಾಷ್ಟ್ರೀಯ ವೈದ್ಯಕೀಯ ಆಯೋಗವು Conditional Renewal ಅನ್ನು ಎಲ್ಲಾ 7 ಸರ್ಕಾರಿ ವೈದ್ಯಕೀಯ ಸಂಸ್ಥೆಗಳಿಗೆ ನೀಡಿರುತ್ತದೆ. |

| | | |
|---|---|---|
| | | ಮುಂದುವರೆದಂತೆ, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಸಂಬಂಧಿಸಿದಂತೆ ರಾಷ್ಟ್ರೀಯ ವೈದ್ಯಕೀಯ ಆಯೋಗವು ಮತ್ತೊಮ್ಮೆ ಪರಿಶೀಲಿಸಿ, ಪ್ರಸ್ತಾವನೆಯನ್ನು ಅಂಗೀಕರಿಸಿರುತ್ತದೆ ಹಾಗೂ ರಾಷ್ಟ್ರೀಯ ವೈದ್ಯಕೀಯ ಆಯೋಗದ ಮಾನದಂಡಗಳನ್ವಯ ಎಲ್ಲಾ ಅಗತ್ಯ ಮೂಲಸೌಕರ್ಯವನ್ನು ಒದಗಿಸಲಾಗಿದೆ. |
| ಈ) | ರಾಷ್ಟ್ರೀಯ ವೈದ್ಯಕೀಯ ಆಯೋಗವು (ಎನ್ಎಂಸಿ) ನಿಗದಿಪಡಿಸಿರುವ ಮಾರ್ಗಸೂಚಿಗಳ ಪಾಲನೆ ಮಾಡಲು ವಿಫಲವಾಗಿರುವ ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿನ ಸೀಟುಗಳ ಸಂಖ್ಯೆಯನ್ನು ಹೆಚ್ಚಿಸಲು ಸರ್ಕಾರ ಈಗಾಗಲೇ ಅಗತ್ಯ ಕ್ರಮ ವಹಿಸಿದೆಯೇ? | ರಾಷ್ಟ್ರೀಯ ವೈದ್ಯಕೀಯ ಆಯೋಗವು (ಎನ್ಎಂಸಿ) ನಿಗದಿಪಡಿಸಿರುವ ಮಾರ್ಗಸೂಚಿಗಳ ಪಾಲನೆ ಮಾಡಲು ಅಗತ್ಯ ಕ್ರಮಕೈಗೊಂಡಿದ್ದು, ರಾಜ್ಯದಲ್ಲಿನ ಎಲ್ಲಾ ವೈದ್ಯಕೀಯ ಕಾಲೇಜುಗಳಿಂದ ಒಟ್ಟು 850 ಯುಜಿ ಎಂಬಿಬಿಎಸ್ ಸೀಟುಗಳನ್ನು 2025-26ನೇ ಶೈಕ್ಷಣಿಕ ಸಾಲಿಗೆ ಹೆಚ್ಚಳ ಮಾಡಲು ಎನ್ಎಂಸಿಗೆ ಈಗಾಗಲೇ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. |

ಸಂಖ್ಯೆ: **ಎಂಇಡಿ 243 ಆರ್ಐ 2025**.

ಡಾ|| ಶರಣ ಪ್ರಕಾಶ ಆರ್. ಪಾಟೀಲ್
ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು